
ಕರ್ನಾಟಕ ವಿಧಾನ ಸಭೆ, ಸಂಶೋಧನಾ ಮತ್ತು ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH
ಪತ್ರಿಕಾ ತುಣುಕುಗಳು
PAPER CLIPPINGS
ಇಲಾಖೆ / ವಿಷಯ : DEPARTMENT / SUBJECT:
ಪತ್ರಿಕೆಯ ಹೆಸರು : NAME OF THE NEWS PAPER: ಪ್ರಜಾವಾಣಿ
ದಿನಾಂಕ : DATE : 9/7/2020

# ಆನ್‌ಲೈನ್ ಶಿಕ್ಷಣ ನಿಷೇಧಕ್ಕೆ ತಡೆ

ಪ್ರಜಾವಾಣಿ ವಾರ್ತೆ 9-7-2020



**ಬೆಂಗಳೂರು:** ಎಲ್‌ಕೆಜಿಯಿಂದ 10ನೇ ತರಗತಿವರೆಗೆ ಆನ್‌ಲೈನ್ ಶಿಕ್ಷಣ ನಿಷೇಧಿಸಿ ರಾಜ್ಯ ಸರ್ಕಾರ ಹೊರಡಿಸಿದ್ದ ಆದೇಶಕ್ಕೆ ಹೈಕೋರ್ಟ್ ಮಧ್ಯಂತರ ತಡೆ ನೀಡಿದೆ.

ಈ ಕುರಿತ ಸಾರ್ವಜನಿಕ ಹಿತಾಸಕ್ತಿ ಅರ್ಜಿಗಳನ್ನು ಮುಖ್ಯ ನ್ಯಾಯಮೂರ್ತಿ ಅಭಯ್ ಎಸ್. ಓಕಾ ಹಾಗೂ ನ್ಯಾಯಮೂರ್ತಿ ಆರ್. ನಟರಾಜ್ ಅವರಿದ್ದ ವಿಭಾಗೀಯ ನ್ಯಾಯಪೀಠ ವಿಚಾರಣೆ ನಡೆಸಿ ಬುಧವಾರ ಈ ಆದೇಶ ಪ್ರಕಟಿಸಿದೆ.

ಇದೇ ವೇಳೆ ಶಿಕ್ಷಣ ಸಂಸ್ಥೆಗಳಿಗೆ ಕೆಲವು ಷರತ್ತುಗಳನ್ನೂ ವಿಧಿಸಿದೆ. ಈ ಕುರಿತಂತೆ ನಾಲ್ಕು ವಾರಗಳಲ್ಲಿ ಆಕ್ಷೇಪಣೆ ಸಲ್ಲಿಸುವಂತೆ ರಾಜ್ಯ ಸರ್ಕಾರಕ್ಕೆ ನಿರ್ದೇಶಿಸಿದೆ.

**ಹಕ್ಕು ಉಲ್ಲಂಘನೆ:** 'ಸರ್ಕಾರದ ಆದೇಶದಿಂದ ಅರ್ಜಿದಾರರ ಮೂಲಭೂತ ಹಕ್ಕುಗಳ ಅತಿಕ್ರಮಣವಾಗಿರುವುದು ಮೇಲ್ನೋಟಕ್ಕೆ ಕಂಡು ಬರುತ್ತಿದೆ. ಆದಾಗ್ಯೂ ತಜ್ಞರ ಸಮಿತಿ ರಚನೆಗೆ ಸಂಬಂಧಿಸಿದಂತೆ ಈ ಆದೇಶ ಅನ್ವಯವಾಗುವುದಿಲ್ಲ. ಈ ವಿಷಯದಲ್ಲಿ ಮಧ್ಯ ಪ್ರವೇಶಿಸುವುದಿಲ್ಲ' ಎಂದು ನ್ಯಾಯಪೀಠ ಹೇಳಿದೆ.

ಎಲ್‌ಕೆಜಿಯಿಂದ 5ನೇ ತರಗತಿವರೆಗೆ ಆನ್‌ಲೈನ್ ಶಿಕ್ಷಣ ನಿಷೇಧಿಸಿ 2020ರ ಜೂನ್ 15ರಂದು ಹೊರಡಿಸಿದ್ದ ಆದೇಶಕ್ಕೆ ತಡೆ ನೀಡಿದೆ. ಅಂತೆಯೇ ಎಲ್‌ಕೆಜಿ, ಯುಕೆಜಿ ಮತ್ತು 1ರಿಂದ 10ನೇ ತರಗತಿವರೆಗೆ ಆನ್‌ಲೈನ್ ಶಿಕ್ಷಣ ಆರಂಭಿಸಲು ಕೆಲವು ನಿಬಂಧನೆ ವಿಧಿಸಿ ಜೂನ್ 27ರಂದು ಹೊರಡಿಸಿದ್ದ ಆದೇಶಕ್ಕೂ ಮಧ್ಯಂತರ ತಡೆ ನೀಡಿದೆ.

**ಕೋರಿಕೆ ಏನು?:** 'ಐಸಿಎಸ್‌ಇ ಹಾಗೂ ಸಿಬಿಎಸ್‌ಇ ಶಾಲೆಗಳ ಪಠ್ಯಕ್ರಮ ಮತ್ತು ಕಲಿಕಾ ಮಾಧ್ಯಮದ ಮೇಲೆ ರಾಜ್ಯ ಸರ್ಕಾರಕ್ಕೆ ಯಾವುದೇ ನಿಯಂತ್ರಣವಿಲ್ಲ. ಕರ್ನಾಟಕ ಶಿಕ್ಷಣ ಕಾಯ್ದೆಯ ಮೂಲಕ ನಿಷೇಧ ಹೇರಲು ಅವಕಾಶವಿಲ್ಲ. ಕೋವಿಡ್-19 ಪರಿಸ್ಥಿತಿ ಎಲ್ಲಿಯವರೆಗೆ ಮುಂದುವರಿಯುತ್ತದೆ ಎಂಬುದು ಗೊತ್ತಿಲ್ಲ. ಆನ್‌ಲೈನ್ ಶಿಕ್ಷಣ ನಿಷೇಧಿಸಿ ಹೊರಡಿಸಿರುವ ರಾಜ್ಯ ಸರ್ಕಾರದ ಆದೇಶ ಕಾನೂನುಬಾಹಿರ. ಇದು ಮಕ್ಕಳ ಶಿಕ್ಷಣ ಮತ್ತು ಮೂಲಭೂತ ಹಕ್ಕಿನ ಉಲ್ಲಂಘನೆಯಾಗಿದ್ದು ರದ್ದುಗೊಳಿಸಬೇಕು' ಎಂದು ಕೋರಿದ್ದರು.

## ಶಿಕ್ಷಣ ಸಂಸ್ಥೆಗಳಿಗೆ ಷರತ್ತು

- ಶಾಲೆಗಳು ಆನ್‌ಲೈನ್ ಶಿಕ್ಷಣವನ್ನು ಕಡ್ಡಾಯಗೊಳಿಸುವಂತಿಲ್ಲ.
- ಹೆಚ್ಚುವರಿ ಶುಲ್ಕವನ್ನೂ ವಿಧಿಸುವಂತಿಲ್ಲ.
- ಆನ್‌ಲೈನ್ ಶಿಕ್ಷಣದ ಸೌಲಭ್ಯ ಪಡೆದುಕೊಳ್ಳಲು ಸಾಧ್ಯವಾಗದ ಮಕ್ಕಳು ನಿರಂತರ ಕಲಿಕೆಯಿಂದ ವಂಚಿತರಾಗದಂತೆ ಶಾಲೆಗಳು ನೋಡಿಕೊಳ್ಳಬೇಕು.
- ಅಂತಹ ಮಕ್ಕಳಿಗೆ ಶಾಲೆ ಪುನರಾರಂಭದ ಬಳಿಕ ವಿಶೇಷ ವ್ಯವಸ್ಥೆ ಕಲ್ಪಿಸಬೇಕು.

## ಜಾತ್ಯತೀತತೆ, ಒಕ್ಕೂಟ ವಿಷಯ ಕೈಬಿಟ್ಟ ಸಿಬಿಎಸ್‌ಇ

**ನವದೆಹಲಿ:** ಪ್ರಸಕ್ತ ಶೈಕ್ಷಣಿಕ ವರ್ಷದ 11ನೇ ತರಗತಿಯ ಪಠ್ಯಕ್ರಮದಿಂದ ಜಾತ್ಯತೀತತೆ, ಪೌರತ್ವ, ರಾಷ್ಟ್ರೀಯತೆ, ಒಕ್ಕೂಟ ವ್ಯವಸ್ಥೆ, ಸ್ಥಳೀಯ ಸರ್ಕಾರಗಳ ಬೆಳವಣಿಗೆ ಮುಂತಾದ ವಿಷಯಗಳನ್ನು ಕೈಬಿಟ್ಟಿರುವ ಕೇಂದ್ರೀಯ ಪ್ರೌಢಶಿಕ್ಷಣ ಮಂಡಳಿಯ (ಸಿಬಿಎಸ್‌ಇ) ಕ್ರಮ ವಿವಾದಕ್ಕೀಡಾಗಿದೆ.

ಕೋವಿಡ್-19 ಬಿಕ್ಕಟ್ಟಿನಿಂದಾಗಿ ಶಾಲೆಗಳು ಮುಚ್ಚಿರುವುದರಿಂದ 9 ರಿಂದ 12ನೇ ತರಗತಿಯವರೆಗೆ ಶೇಕಡ 30ರಷ್ಟು ಪಠ್ಯಕ್ರಮವನ್ನು ಕಡಿತಗೊಳಿಸಲು ನಿರ್ಧರಿಸಿದ್ದ ಸಿಬಿಎಸ್‌ಇ, ಈ ಕ್ರಮಕೈಗೊಂಡಿತ್ತು.

'ಪ್ರಜಾಪ್ರಭುತ್ವ ಮತ್ತು ವೈವಿಧ್ಯತೆ', 'ಜನಪ್ರಿಯ ಹೋರಾಟ ಮತ್ತು ಚಳವಳಿಗಳು' ಹಾಗೂ 'ಪ್ರಜಾಪ್ರಭುತ್ವಕ್ಕೆ ಸವಾಲುಗಳು' ವಿಷಯಗಳನ್ನು ಸಹ 10ನೇ ತರಗತಿಯ ರಾಜ್ಯಶಾಸ್ತ್ರ ಪಠ್ಯದಿಂದ ಕೈಬಿಟ್ಟಿದೆ.

12ನೇ ತರಗತಿ ಪಠ್ಯಕ್ರಮದಿಂದ 'ವಿಭಜನೆಯನ್ನು ತಿಳಿದುಕೊಳ್ಳುವುದು' ಮತ್ತು 'ನೋಟು ರದ್ದು' ಹಾಗೂ ನೆರೆಯ ರಾಷ್ಟ್ರಗಳಾದ ಪಾಕಿಸ್ತಾನ, ಮ್ಯಾನ್ಮಾರ್, ಬಾಂಗ್ಲಾದೇಶ, ಶ್ರೀಲಂಕಾ, ನೇಪಾಳ ಜತೆ ಸಂಬಂಧದ ವಿಷಯಗಳನ್ನು ಬಿಡಲಾಗಿದೆ. ವಿದ್ಯಾರ್ಥಿಗಳ ಮೇಲಿನ ಹೊರೆ ಕಡಿಮೆ ಮಾಡಲು ಈ ವಿಷಯಗಳನ್ನು ಕಡಿತಗೊಳಿಸಲಾಗಿದ್ದು, ಪ್ರಮುಖ ವಿಷಯ ಉಳಿಸಿಕೊಳ್ಳಲಾಗಿದೆ ಎಂದು ಮಾನವ ಸಂಪನ್ಮೂಲ ಅಭಿವೃದ್ಧಿ ಸಚಿವಾಲಯ ತಿಳಿಸಿದೆ.

ಸಿಬಿಎಸ್‌ಇಯ ಈ ನಿರ್ಧಾರಕ್ಕೆ ಕಾಂಗ್ರೆಸ್ ಹಾಗೂ ಇತರ ವಿರೋಧ ಪಕ್ಷಗಳು ಆಕ್ಷೇಪ ವ್ಯಕ್ತಪಡಿಸಿವೆ.



**ಜಾತ್ಯತೀತತೆ ಮತ್ತು ಒಕ್ಕೂಟ ವ್ಯವಸ್ಥೆ ಪ್ರಜಾಪ್ರಭುತ್ವದ ಆಧಾರ ಸ್ತಂಭಗಳು. ಪಠ್ಯಕ್ರಮದಿಂದ ಈ ವಿಷಯಗಳನ್ನು ಕೈಬಿಟ್ಟು ಯಾವ ರೀತಿಯ ಸಂದೇಶ ನೀಡುತ್ತಿದ್ದೀರಿ**

**ಅಭಿಷೇಕ್ ಮನು ಸಿಂಘ್ವಿ,** ಕಾಂಗ್ರೆಸ್ ವಕ್ತಾರ



**ಇದೊಂದು ಆಘಾತಕಾರಿ ನಿರ್ಧಾರ. ನಾವು ಆಕ್ಷೇಪ ವ್ಯಕ್ತಪಡಿಸುತ್ತೇವೆ. ಈ ವಿಷಯಗಳನ್ನು ಕೈಬಿಡಬಾರದು ಎಂದು ಮಾನವ ಸಂಪನ್ಮೂಲ ಅಭಿವೃದ್ಧಿ ಸಚಿವಾಲಯಕ್ಕೆ ಕೋರುತ್ತೇನೆ**

**ಮಮತಾ ಬ್ಯಾನರ್ಜಿ,** ಪಶ್ಚಿಮ ಬಂಗಾಳ ಮುಖ್ಯಮಂತ್ರಿ

'ಸಿಬಿಎಸ್‌ಇ ವಿರುದ್ಧ ನ್ಯಾಯಾಲಯದಲ್ಲಿ ಅರ್ಜಿ ಸಲ್ಲಿಸುವ ಬಗ್ಗೆ ಯೋಚಿಸುತ್ತಿದ್ದೇನೆ' ಎಂದು ಕಾಂಗ್ರೆಸ್ ವಕ್ತಾರ ಅಭಿಷೇಕ್ ಮನು ಸಿಂಘ್ವಿ ಹೇಳಿದ್ದಾರೆ.

ಶಿವಸೇನಾ ಸಹ ಈ ಬಗ್ಗೆ ದನಿ ಎತ್ತಿದ್ದು, 'ವೈವಿಧ್ಯಮಯ ಚಿಂತನಗಳನ್ನು ಅಳವಡಿಸಿಕೊಳ್ಳಲು ಮೋದಿ ಸರ್ಕಾರ ಸಹಿಷ್ಣುತ ಗುಣವನ್ನು ಬೆಳೆಸಿಕೊಳ್ಳಬೇಕು' ಎಂದು ಹೇಳಿದೆ.

'ದೇಶದ ಸಂವಿಧಾನದ ಮೌಲ್ಯಗಳನ್ನು ಎತ್ತಿಹಿಡಿಯುವ ವೈವಿಧ್ಯತೆ, ಬಹುತ್ವ, ಪ್ರಜಾಪ್ರಭುತ್ವ ಕುರಿತಾದ ಅಂಶಗಳನ್ನೇ ಮೋದಿ ಸರ್ಕಾರ ತೆಗೆದುಹಾಕುತ್ತಿದೆ. ಇದು ಆರ್‌ಎಸ್‌ಎಸ್‌ನ ಫ್ಯಾಸಿಸ್ಟ್ ಸಿದ್ಧಾಂತಗಳನ್ನು ಸಿಬಿಎಸ್‌ಇ ಮೂಲಕ ಹೇರುವ ಪ್ರಯತ್ನ' ಎಂದು ಸಿಪಿಎಂ ಪ್ರಧಾನ ಕಾರ್ಯದರ್ಶಿ ಸೀತಾರಾಂ ಯೆಚೂರಿ ಹೇಳಿದ್ದಾರೆ.

ಇನ್ನೊಂದು ಸುದ್ದಿ 6